ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 25/8/2020

# ವಿಧಾನಸೌಧದಲ್ಲೇ ಮುಂಗಾರು ಅಧಿವೇಶನ

ಬೆಂಗಳೂರು: ವಿಧಾನಮಂಡಲದ ಮುಂಗಾರು ಅಧಿವೇಶನವನ್ನು ವಿಧಾನ ಸಭೆ ಮತ್ತು ಪರಿಷತ್ತಿನ ಸಭಾಂಗಣದಲ್ಲಿಯೇ ನಡೆಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ತಿಳಿಸಿದರು.

ಸೆ. 21 ರಿಂದ ಆರಂಭವಾಗಲಿರುವ ಅಧಿವೇಶನಕ್ಕೆ ಸಂಬಂಧಿಸಿದ ತಯಾರಿಗಳನ್ನು ವೀಕ್ಷಿಸಲು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಅವರ ಜತೆ ವಿಧಾನಸಭೆಯ ಸಭಾಂಗಣಕ್ಕೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರ ಜತೆ ಮಾತನಾಡಿದರು.

ವಿಧಾನಸಭೆಯಲ್ಲಿ ಒಟ್ಟು 274 ಆಸನಗಳಿವೆ. ಹೀಗಾಗಿ ಸದಸ್ಯರ ಆಸನಗಳ ಮಧ್ಯೆ ಅಂತರ ಕಾಪಾಡಲಾಗುವುದು. ಪ್ರತಿ ಸದಸ್ಯರ ಆಸನದ ಎರಡೂ ಬದಿಗಳಲ್ಲಿ ಗಾಜಿನ ರಕ್ಷಾ ತಡೆಗಳನ್ನು ಅಳವಡಿಸಲಾಗುವುದು. ಸದಸ್ಯರು ಮುಖ ಗವುಸು ಮತ್ತು ಮುಖರಕ್ಷಕಗಳನ್ನು ಕಡ್ಡಾಯವಾಗಿ ಧರಿಸಬೇಕು. ಅಧಿಕಾರಿಗಳು ಮತ್ತು ಪ್ರಧಾನ ಕಾರ್ಯದರ್ಶಿಗಳಿಗೆ ಮಾತ್ರ ಅಧಿವೇಶನಕ್ಕೆ ಪ್ರವೇಶ ಇರುತ್ತದೆ. ಸುದ್ದಿಗಾರರಿಗೆ ಪ್ರವೇಶ ನೀಡುವ ಬಗ್ಗೆ ಚರ್ಚೆ ನಡೆಸಿ ನಿರ್ಧರಿಸಲಾಗುವುದು. ಪ್ರೇಕ್ಷಕರ ಗ್ಯಾಲರಿಗೆ ಪ್ರವೇಶ ನಿರ್ಬಂಧಿಸಲಾಗುವುದು ಎಂದು ಅವರು ಹೇಳಿದರು.